# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1045 |
| ವಿಧಾನ ಪರಿಷತ್ತು ಸದಸ್ಯರ ಹೆಸರು | : | ಶ್ರೀ ಯು.ಬಿ ವೆಂಕಟೇಶ್ (ನಾಮನಿರ್ದೇಶನ ಹೊಂದಿದವರು) |
| ಉತ್ತರಿಸಬೇಕಾದ ದಿನಾಂಕ | : | 29.09.2020 |
| ಉತ್ತರಿಸುವ ಸಚಿವರು | : | ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖಾ ಸಚಿವರು. |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯದಲ್ಲಿ ಒಟ್ಟು ಪಡಿತರ ವಿತರಣೆ ಮಾಡುವ ವಿತರಣಾ ಸಂಘ-ಸಂಸ್ಥೆ ಮತ್ತು ಪರವಾನಗಿದಾರರ ಸಂಖ್ಯೆಯೆಷ್ಟು ಇವರಲ್ಲಿ ಅಂಗವಿಕಲರಿಗೆ ಮೀಸಲಾತಿ ನೀಡಲಾಗಿದೆಯೇ; **(ಸಂಘ-ಸಂಸ್ಥೆಗಳ ಹೆಸರು ಸಮೇತ ವಿವರ ನೀಡುವುದು)** | ರಾಜ್ಯದಲ್ಲಿ ಪ್ರಸ್ತುತ 19852 ನ್ಯಾಯಬೆಲೆ ಅಂಗಡಿಗಳಿದ್ದು, ಇವುಗಳಲ್ಲಿ 86 ನ್ಯಾಯಬೆಲೆ ಅಂಗಡಿಗಳನ್ನು ಅಂಗವಿಕಲರಿಗೆ ಮಂಜೂರು ಮಾಡಲಾಗಿರುತ್ತದೆ.<br>ಜಿಲ್ಲಾವಾರು ಮಾಹಿತಿಯನ್ನು ಅನುಬಂಧದಲ್ಲಿ ಒದಗಿಸಲಾಗಿದೆ. |
| ಆ | ಪಡಿತರ ವಿತರಣಾ ಪರವಾನಗಿಯನ್ನು ಸಂಘ-ಸಂಸ್ಥೆಗೆ ಹಾಗೂ ಅಂಗವಿಕಲರಿಗೆ ನೀಡಲು ಇರುವ ಮಾನದಂಡವೇನು ಹಾಗೂ ಅವುಗಳನ್ನು ಅನುಸರಿಸಲಾಗಿದೆಯೇ; | ಹೊಸ ನ್ಯಾಯಬೆಲೆ ಅಂಗಡಿಗಳಿಗೆ ಅರ್ಜಿ ಸಲ್ಲಿಸಲು ಕರ್ನಾಟಕ ಅಗತ್ಯ ವಸ್ತುಗಳ (ಸಾವಿಪ) ನಿಯಂತ್ರಣ ತಿದ್ದುಪಡಿ ಆದೇಶ ದಿನಾಂಕ:21-05-2018ರ ಆದೇಶದನ್ವಯ ಅನುಸರಿಲಾಗುತ್ತಿರುವ ಮಾನದಂಡಗಳು ಕೆಳಕಂಡಂತಿವೆ:<br>ಎ) ಸರ್ಕಾರದ ನಿಗಮಗಳು/ಗ್ರಾಮ ಪಂಚಾಯಿತಿ/ಸ್ಥಳೀಯ ನಗರ ಸಂಸ್ಥೆಗಳು<br>ಬಿ) ಸಹಕಾರ ಸಂಘಗಳು.<br>1.ಟಿಎಪಿಸಿಎಂಎಸ್/ಕೋ-/ಆಪರೇಟಿವ್ ಮಾರ್ಕೆಂಟಿಂಗ್ ಸೊಸೈಟಿಗಳು.<br>2.ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳು/ ಪಿ.ಎಸ್.ಎಸ್.ಎನ್<br>3. ಹಾಫ್ ಕಾಮ್ಸ್<br>4. ಅಧಿಕೃತ ನೋಂದವಣಿಯಾದ ಸಹಕಾರ ಸಂಘಗಳು<br>5. ಅಧಿಕೃತ ನೋಂದಣಿಯಾದ ಪ್ರಾಥಮಿಕ ಬಳಕೆದಾರರ ಸಹಕಾರ ಸಂಘಗಳು<br>6. ನೋಂದಣಿಯಾದ ಆದಿವಾಸಿ ವಿವಿದ್ದೋದ್ದೇಶ ಸಹಕಾರ ಸಂಘಗಳು.<br>7. ನೋಂದಣಿಯಾದ ನೇಕಾರರ ಸಹಕಾರ ಸಂಘಗಳು<br>8.ನೋಂದಣಿಯಾದ ಮಹಿಳಾ ವಿವಿದ್ದೋದ್ದೇಶ ಸಹಕಾರ ಸಂಘಗಳು<br>9. ನೋಂದಣಿಯಾದ ವಿವಿದ್ದೋದ್ದೇಶ ಸಹಕಾರ ಸಂಘಗಳು<br>10. ಅಂಗವಿಕಲ ಕಲ್ಯಾಣ ಸಹಕಾರ ಸಂಘಗಳು<br>11. ಸಹಕಾರ ಸಂಘಗಳು ನಡೆಸುವ ಬ್ಯಾಂಕ್ ಅಥವಾ ಕೋ-ಆಪರೇಟಿವ್ ಬ್ಯಾಂಕುಗಳು. |

| | | |
|---|---|---|
| | | ಸಿ) ಖಾಸಗಿ- 1) ವಿಕಲಚೇತನರ ವರ್ಗ Bench mark disability (ಪ್ರಾರಂಭಿಕವಾಗಿ 400 ನ್ಯಾಯಬೆಲೆ ಅಂಗಡಿಗಳು) 2) ಮಂಗಳಮುಖಿಯರ ವರ್ಗ (ಪ್ರಾರಂಭಿಕವಾಗಿ 30 ನ್ಯಾಯಬೆಲೆ ಅಂಗಡಿಗಳು)<br><br>ಮೇಲ್ಕಂಡ ಸಹಕಾರ ಸಂಘಗಳ ಗುಣಮಟ್ಟವನ್ನು ಅವರಿಗೆ ನೀಡಲಾಗಿರುವ ಎ ಬಿ ಮತ್ತು ಸಿ ಶ್ರೇಣಿಯ ಆಡಿಟ್ ವರದಿಯನ್ನು ಪರಿಗಣಿಸಲಾಗುವುದು ಮತ್ತು ಸದರಿ ಸಹಕಾರ ಸಂಘಗಳು 03 ವರ್ಷಗಳಿಗಿಂತ ಹಿಂದಿನವುಗಳಾಗಿರಬೇಕು ಹಾಗೂ ಕಳೆದ 2 ವರ್ಷಗಳಿಂದ ನಿರಂತರವಾಗಿ ರೂ.200000/-ದಷ್ಟು ಮೊತ್ತದ ಬ್ಯಾಂಕ್ ಬ್ಯಾಲೆನ್ಸ್ ಹೊಂದಿರಬೇಕು. ಆದೇಶದ ಕಂಡಿಕೆ(5)(ಬಿ) ರನ್ವಯ 2 ತಿಂಗಳ ಪಡಿತರ ಹಂಚಿಕೆಯ ಆಹಾರಧಾನ್ಯ ಪ್ರಮಾಣವನ್ನು ಶೇಖರಿಸಿಡಲು ಸಾಕಷ್ಟು ಸಂಗ್ರಹಣಾ ಸಾಮರ್ಥ್ಯದ ಮಳಿಗೆ ಜಾಗವನ್ನು ಹೊಂದಿರಬೇಕು. |
| ಇ | ಪ್ರತಿ ತಿಂಗಳು ಯಾವ ಅವಧಿಯಲ್ಲಿ ಪಡಿತರ ವಿತರಣೆ ಮಾಡಲಾಗುತ್ತಿದೆ; | ಸರ್ಕಾರದ ನಿಯಮಗಳಂತೆ ಆಯಾ ತಿಂಗಳ 11ನೇ ತಾರೀಖಿನಿಂದ ಮಾಹೆಯ ಅಂತ್ಯದವರೆಗೆ ನ್ಯಾಯಬೆಲೆ ಅಂಗಡಿಗಳಲ್ಲಿ ಪಡಿತರ ವಿತರಣೆ ಮಾಡಲಾಗುತ್ತಿದೆ. ವಿತರಣೆಯನ್ನು ಪ್ರತಿ ಮಂಗಳವಾರ ಮತ್ತು ರಾಜ್ಯ ಸರ್ಕಾರದ ಇತರೆ ರಜಾ ದಿನಗಳನ್ನು ಹೊರತುಪಡಿಸಿ ಉಳಿದ ಎಲ್ಲಾ ದಿವಸಗಳಂದು ಬೆಳಗ್ಗೆ 7.00 ಮಧ್ಯಾಹ್ನ 12.00 ರವರೆಗೆ ಮತ್ತು ಸಂಜೆ 4.00 ರಿಂದ ರಾತ್ರಿ 8.00 ರವರೆಗೆ ಪಡಿತರ ವಿತರಣೆ ಮಾಡಲಾಗುತ್ತಿದೆ. |
| ಈ | ಪರವಾನಗಿ ಹೊಂದಿರುವ ವಿತರಕರು ತಮಗೆ ಅವಕಾಶ ಸಿಕ್ಕಾಗ ಮಾತ್ರ ವಿತರಣೆ ಮಾಡುತ್ತಿರುವುದರಿಂದ, ಜನರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿರುವುದಿಲ್ಲ. |
| ಉ | ಬಂದಿದ್ದಲ್ಲಿ, ನಿಗದಿತ ಅವಧಿಯಲ್ಲಿ ವಿತರಣೆ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ವಿವರವನ್ನು ಒದಗಿಸುವುದು) | ಉದ್ಭವಿಸುವುದಿಲ್ಲ. |

ಆನಾಸ 56 ಅನಾಸ 2020 (ಇ-ಆಫೀಸ್)

(ಕೆ.ಗೋಪಾಲಯ್ಯ)
ಆಹಾರ, ನಾಗರಿಕ ಸರಬರಾಜು ಮತ್ತು
ಗ್ರಾಹಕರ ವ್ಯವಹಾರಗಳ ಹಾಗೂ
ಕಾನೂನು ಮಾಪನಶಾಸ್ತ್ರ ಇಲಾಖಾ ಸಚಿವರು.